## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ 2018-19ನೇ ಸಾಲಿನ ಪೊಲೀಸ್ ಆಧುನೀಕರಣ ಯೋಜನೆ ಅಡಿಯಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಿಗೆ ಬಿಡುಗಡೆಯಾದ ಅನುದಾನವನ್ನು ಠೇವಣಿ ಇಡುವ ಬಗ್ಗೆ.ಆದೇಶ.

ಓದಲಾಗಿದೆ: ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರವರ ಪತ್ರ ಸಂಖ್ಯೆ 02/ ಸಂಗ್ರಹ / ಎಡಿಜಿಪಿ/ಅಮತ್ತುತಾಂಸೇ/2019-20 (ವಾಲ್ಯುಂ-2, ದಿನಾಂಕ 23.03.2020.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ಮಹಾ ನಿರ್ದೇಶಕರು ಮತ್ತು ಅರಕ್ಷಕ ಮಹಾ ನಿರೀಕ್ಷಕರು ಸರ್ಕಾರಕ್ಕೆ ಪತ್ರವನ್ನು ಬರೆದು 2018-19 ನೇ ಸಾಲಿನ ಪೊಲೀಸ್ ಆಧುನೀಕರಣ ಯೋಜನೆಯಡಿಯಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಿಗೆ ಬೇಕಾದ ಈ ಕೆಳಕಂಡ ಉಪಕರಣಗಳನ್ನು ಖರೀದಿಸುವ ಸಂಬಂಧ ರೂ.339.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

| Sl. No. | Equipment | Qty | Remarks |
|---|---|---|---|
| 1. | Cold Storage | 1 | Purchase Order Issued for |
| 2. | Water Purification System | 1 | |
| 3. | Binocular Microscope | 1 | |
| 4. | SOC Kits | 10 | |
| 5. | Trinacular Microscope | 2 | |
| 6. | Refrigerated Micro Centrifuge | 1 | |
| 7 | Audio Authentication Software | 1 | |
| 8 | Head Space GC with FID & TCD Detector | 1 | |
| 9 | Lie detector/Polygraph | 3 | |
| 10 | GCMS | 1 | |
| 11 | PC with Printer | 20 | Awaiting For TAP Approval |

ಈ ಅನುದಾನದಲ್ಲಿ ಉಪಕರಣಗಳ ಖರೀದಿಗೆ ಸಂಬಂಧಿಸಿದಂತೆ ಟೆಂಡರ್ ಪ್ರಕ್ರಿಯೆ ಕೈಗೊಂಡು 10 ಉಪಕರಣಗಳಿಗೆ ಖರೀದಿ ಆದೇಶಗಳನ್ನು ನೀಡಲಾಗಿರುತ್ತದೆ. ಎಂದು ತಿಳಿಸಿ ರೂ.339.00 ಲಕ್ಷಗಳ ಅನುದಾನವನ್ನು ಈ ಆರ್ಥಿಕ ವರ್ಷದಲ್ಲಿ ಉಪಯೋಗಿಸಿಕೊಳ್ಳಲು ಸಾಧ್ಯವಾಗದ ಕಾರಣ ಕೆ.ಎಸ್.ಪಿ.ಹೆಚ್ ಮತ್ತು ಐ.ಡಿ.ಸಿ.ಎಲ್ ಬೆಂಗಳೂರು ಇವರಲ್ಲಿ ಠೇವಣಿ ಇಡಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರ ರವರ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

Scanned with CamScanner

**ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 36 ಇಂಫ್‌ಎಸ್ 2020, ಬೆಂಗಳೂರು,**

**ದಿನಾಂಕ: 24 ಮಾರ್ಚ್/2020ರ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನ ಪೊಲೀಸ್ ಆಧುನೀಕರಣ ಯೋಜನೆ ಅಡಿಯಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಿಗೆ ಬಿಡುಗಡೆಯಾದ ಅನುದಾನವನ್ನು ರೂ.3,39,00,000/- ಗಳ (ಮೂರು ಕೋಟಿ ಮೂವತ್ತೊಂಬತ್ತು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಕೆ.ಎಸ್.ಪಿ.ಹೆಚ್. & ಐ.ಡಿ.ಸಿ.ಎಲ್ ರವರಲ್ಲಿ ಪೇಯಿಸ್ ರಸೀದಿ ಮೂಲಕ ಖಜಾನೆಯಿಂದ ಡ್ರಾ ಮಾಡಿ ಠೇವಣಿ ಇಡಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಅ.ಮು.ಕಾ.ರವರ 1064 ಅ.ಮು.ಕಾ/2020, ದಿನಾಂಕ: 24.03.2020ರಲ್ಲಿ ನೀಡಿರುವ ಅನುಮೋದನೆಯಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎನ್.ದೇವರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ವೆಚ್ಚ)

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560 001.
2. ಮಹಾಲೇಖಪಾಲರು (ಇ & ಆರ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560 001.
3. ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329 /5369, ಬೆಂಗಳೂರು-560 001.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯಗಳು, ಬೆಂಗಳೂರು.
6. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-11), ವಿಧಾನಸೌಧ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಸಮನ್ವಯ), ವಿಧಾನಸೌಧ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner